ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(6)ಪಿಆರ್/ಇ-14010/21-22

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 18/9/21

ಕಛೇರಿ ಆದೇಶ

ವಿಷಯ: ಶ್ರೀ ಅಶೋಕ್ ಪಾಟೀಲ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ರವರನ್ನು ಪಾಲಿಕೆಯ ಸೇವೆಯಿಂದ ಬಿಡುಗಡೆಗೊಳಿಸುವ ಬಗ್ಗೆ.

ಉಲ್ಲೇಖ: 1) ಶ್ರೀ ಅಶೋಕ್ ಪಾಟೀಲ್, ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ರವರ ಮನವಿ ದಿನಾಂಕ: 09-08-2021
2) ಈ ಕಛೇರಿ ಸಮ ಸಂಖ್ಯೆಯ ಪತ್ರ ದಿನಾಂಕ: 03-09-2021

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಶ್ರೀ ಅಶೋಕ್ ಪಾಟೀಲ್, ಸಹಾಯಕ ಕಾರ್ಯಪಾಲಕ ಅಭಿಯಂತರರು, ಲೋಕೋಪಯೋಗಿ ಇಲಾಖೆಯಿಂದ ಎರವಲು ಸೇವೆಯ ಮೇಲೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯಲ್ಲಿ ಜಂಟಿ ನಿರ್ದೇಶಕರು (ನಗರಯೋಜನೆ-ಉತ್ತರ) ಕಛೇರಿಯಲ್ಲಿ ಸಹಾಯಕ ನಿರ್ದೇಶಕರು (ನಗರಯೋಜನೆ-ಉತ್ತರ) ಆಗಿ ಕಾರ್ಯನಿರ್ವಹಿಸುತ್ತಿದ್ದು, ಸದರಿಯವರು ಉಲ್ಲೇಖಿತದಂತೆ ಮನವಿ ಸಲ್ಲಿಸಿ 33 ವರ್ಷ ಸರ್ಕಾರಿ ಸೇವೆ ಸಲ್ಲಿಸಿದ್ದು, ಮಾನಸಿಕ ಸ್ಥಿಮಿತದಲ್ಲಿ ವ್ಯತ್ಯಾಸವಾಗುತ್ತಿರುವುದರಿಂದ, ಸ್ವಯಂನಿವೃತ್ತಿ ಪಡೆಯಲು ಇಚ್ಚಿಸಿದ್ದು, ನನ್ನ ಮನವಿಯನ್ನು ಮಾತೃ ಇಲಾಖೆಗೆ ಕಳುಹಿಸಲು ತಿಳಿಸಿದ್ದರಿಂದ ಉಲ್ಲೇಖ-(2)ರಂತೆ ಸದರಿ ಅಧಿಕಾರಿಯವರ ಸ್ವಯಂನಿವೃತ್ತಿಗೆ ಸಂಬಂಧಿಸಿದ ಮನವಿಯನ್ನು ಲೋಕೋಪಯೋಗಿ ಇಲಾಖೆಗೆ ಕಳುಹಿಸಲಾಗಿರುತ್ತದೆ. ಪ್ರಸ್ತುತ ಸದರಿ ಅಭಿಯಂತರರು ಮನವಿ ಸಲ್ಲಿಸಿ, ಮಾನಸಿಕ ಸ್ಥಿಮಿತದಲ್ಲಿ ವ್ಯತ್ಯಾಸವಾಗುತ್ತಿರುವುದಾಗಿ ತಿಳಿಸಿರುವುದರಿಂದ, ಇವರ ಸೇವೆ ಪಾಲಿಕೆಗೆ ಅವಶ್ಯಕತೆ ಇಲ್ಲವೆಂದು ಪರಿಗಣಿಸಿ, ಸದರಿಯವರನ್ನು ಈ ತಕ್ಷಣದಿಂದ ಪಾಲಿಕೆಯ ಕೆಲಸಕಾರ್ಯಗಳಿಂದ ಕೆಳಕಂಡ ಷರತ್ತಿಗೊಳಪಡಿಸಿ, ಪಾಲಿಕೆಯ ಸೇವೆಯಿಂದ ಬಿಡುಗಡೆ ಮಾಡಿ ಮಾತೃ ಇಲಾಖೆಗೆ ಹಿಂದಿರುಗಿಸಲಾಗಿದೆ.

ಷರತ್ತುಗಳು:-

1. ಸದರಿ ಅಭಿಯಂತರರು ನಗರ ಪಾಲಿಕೆಯ ಸೇವಾ ಅವಧಿಯಲ್ಲಿ ನಗರ ಪಾಲಿಕೆಗೆ ಯಾವುದೇ ಆರ್ಥಿಕ ಬಾಕಿಯನ್ನು ಉಳಿಸಿಕೊಂಡಿದ್ದಲ್ಲಿ ಸದರಿಯವರಿಂದ ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ.
2. ಸದರಿ ಅಭಿಯಂತರರ ವಿರುದ್ಧ ಇಲಾಖಾ ವಿಚಾರಣೆ ಬಾಕಿ ಇದ್ದಲ್ಲಿ ನಿಯಮಾನುಸಾರ ಕ್ರಮಜರುಗಿಸುವ ಷರತ್ತಿಗೊಳಪಡಿಸಿದೆ.
3. ಪಾಲಿಕೆಯ ಹಿಂದಿನ ವರ್ಷಗಳ ಆಡಿಟ್ ವರದಿಗಳಲ್ಲಿ ಯಾವುದೇ ಆರ್ಥಿಕ ಬಾಕಿಯನ್ನು ಸದರಿಯವರಿಂದ ವಸೂಲಾತಿ ಮಾಡಲು ಸೂಚಿಸಿದಲ್ಲಿ, ಅಂತಹ ಮೊತ್ತವನ್ನು ವಸೂಲಾತಿ ಮಾಡುವ ಷರತ್ತಿಗೊಳಪಡಿಸಿದೆ ಹಾಗೂ ಆಕ್ಷೇಪಣೆಗಳಿದ್ದಲ್ಲಿ ಅವುಗಳಿಗೆ ಸಮರ್ಪಕ ಉತ್ತರ ನೀಡುವ ಷರತ್ತು ವಿಧಿಸಿದೆ.
4. ಸದರಿ ಅಭಿಯಂತರರು ನಗರ ಪಾಲಿಕೆಯ ವಸತಿಗೃಹದಲ್ಲಿ ವಾಸಿಸುತ್ತಿದ್ದಲ್ಲಿ ಕೂಡಲೇ ತೆರವುಗೊಳಿಸುವ ಷರತ್ತಿಗೊಳಪಡಿಸಿದೆ.
5. ವಾಕಿ ಟಾಕಿ, ಮೊಬೈಲ್ ಫೋನ್, ಸಿಮ್‌ಕಾರ್ಡ್, ಹೆಲ್ಮೆಟ್, ಗುರುತಿನಚೀಟಿ (Identity Card) ಹಾಗೂ ಲ್ಯಾಪ್‌ಟಾಪ್ ಗಳನ್ನು ಪಾಲಿಕೆಯಿಂದ ಪಡೆದಿದ್ದಲ್ಲಿ ಇವುಗಳನ್ನು ಪಾಲಿಕೆಗೆ ಹಿಂದಿರುಗಿಸುವ ಷರತ್ತಿಗೊಳಪಡಿಸಿದೆ.

ಮಾನ್ಯ ಮುಖ್ಯ ಆಯುಕ್ತರು ರವರ
ಆದೇಶದ ಮೇರೆಗೆ)

ಉಪ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
18/9/21 18/9/2021

ಪ್ರತಿಯನ್ನು :

ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
ಮಾನ್ಯ ಮುಖ್ಯ ಆಯುಕ್ತರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
ವಿಶೇಷ ಆಯುಕ್ತರು (ಯೋಜನೆ) / ವಿಶೇಷ ಆಯುಕ್ತರು (ಆಡಳಿತ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
ಸರ್ಕಾರದ ಅಧೀನ ಕಾರ್ಯದರ್ಶಿಗಳು, ನಗರಾಭಿವೃದ್ಧಿ ಇಲಾಖೆ, ಕರ್ನಾಟಕ ಸರ್ಕಾರ, ವಿಕಾಸ ಸೌಧ, ಬೆಂ ರವರಿಗೆ ಕಳುಹಿಸಿದೆ
ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಬೆಂ ರವರಿಗೆ ಕಳುಹಿಸಿದೆ.
ಮುಖ್ಯ ಅಭಿಯಂತರರು / ಮುಖ್ಯ ಅಭಿಯಂತರರು (ಯೋಜನೆ-ಕೇಂದ್ರ) ರವರಿಗೆ ಕಳುಹಿಸಿದೆ.
ಜಂಟಿ ನಿರ್ದೇಶಕರು (ನಗರಯೋಜನೆ) / ಜಂಟಿ ನಿರ್ದೇಶಕರು (ನಗರಯೋಜನೆ-ಉತ್ತರ) ರವರಿಗೆ ಕಳುಹಿಸಿದೆ
ಮುಖ್ಯ ತಂತ್ರಜ್ಞಾನ ಸಲಹೆಗಾರರುರವರಿಗೆ ಕಳುಹಿಸುತ್ತಾ, ಸದರಿಯವರು ಮೊಬೈಲ್ ಫೋನ್, ಸಿಮ್ ಕಾರ್ಡ್ ಅನ್ನು ಹಿಂದಿರುಗಿಸಿರುವ ಬಗ್ಗೆ ದೃಢೀಕರಿಸಿಕೊಳ್ಳುವುದು.
ಮು.ಲೆ.ಪ ರವರಿಗೆರವರಿಗೆ /ಉ.ನಿ (ಹಣಕಾಸು-ಕೇಂದ್ರ) ರವರಿಗೆ ಕಳುಹಿಸಿದೆ
ಸಹಾಯಕ ಕಾರ್ಯಪಾಲಕ ಅಭಿಯಂತರರಿಗೆ / ಕಛೇರಿ ಪ್ರತಿ

20/9/21